# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

## ದಾಸರಹಳ್ಳಿ ವಲಯ, ಹೆಗ್ಗನಹಳ್ಳಿ ಉಪವಿಭಾಗ

**ದಿನಾಂಕ: 19.01.2022 ರಂದು ಬೆಳಿಗ್ಗೆ 11.30 ಗಂಟೆಗೆ ಶ್ರೀ ರಂಗನಾಥ್ ಬಿ.ಆರ್ ನೋಡಲ್ ಅಧಿಕಾರಿ, ವಾರ್ಡ್ 70 ರವರ ಅಧ್ಯಕ್ಷತೆಯಲ್ಲಿ ಸಹಾಯಕ ಕಾರ್ಯಪಾಲಕ ಅಭಿಯಂತರರು, ಹೆಗ್ಗನಹಳ್ಳಿ ಉಪವಿಭಾಗ ಕಛೇರಿಯಲ್ಲಿ ನಡೆದ ಸಭೆಯ ನಡಾವಳಿಗಳು:**

**ಸಭೆಯಲ್ಲಿ ಹಾಜರಿದ್ದವರು:**

| ಕ್ರ.ಸಂ | ಹೆಸರು | ಪದನಾಮ |
|---|---|---|
| 1 | ಶ್ರೀ ರಂಗನಾಥ್ ಬಿ.ಆರ್ | ನೋಡಲ್ ಅಧಿಕಾರಿ–ವಾರ್ಡ್ ನಂ.70 |
| 2 | ಶ್ರೀ ಅವೀಶ್ ಹೆಚ್ ಎಂ | ಸಹಾಯಕ ಅಭಿಯಂತರರು, ಕಾರ್ಯದರ್ಶಿ ಹಾಗೂ ಸಂಚಾಲಕರು–ವಾರ್ಡ್ 70 |
| 3 | ಕೆ.ಶಿವಲಿಂಗಯ್ಯ | ಹಿರಿಯ ಆರೋಗ್ಯ ಪರಿವೀಕ್ಷಕರು |
| 4 | ಬಿ ಜಿ ಮಂಗಳಮ್ಮ | ಲಿಂಕ್ ವರ್ಕರ್ |
| 5 | ಕಮಲ | ಲಿಂಕ್ ವರ್ಕರ್ |
| 6 | ಸ್ವಾಮಿ | ಕಿರಿಯ ಆರೋಗ್ಯ ಪರಿವೀಕ್ಷಕರು |

**–:ನಡಾವಳಿಯ ವರದಿ:–**

➢ ಕಾರ್ಯದರ್ಶಿಗಳಾದ ಶ್ರೀ ಅವೀಶ್ ಹೆಚ್ ಎಂ ಮಾತನಾಡುತ್ತಾ ಸಭೆಗೆ ಹಾಜರಾದ ನೋಡಲ್ ಅಧಿಕಾರಿ ಹಾಗೂ ಪಾಲಿಕೆಯ ಅಧಿಕಾರಿಗಳು/ನೌಕರರಿಗೆ ಸ್ವಾಗತ ಕೋರಿದರು.

- **<u>ವಿಷಯ ಸಂಖ್ಯೆ:1</u>**
  **ಪೌರಕಾರ್ಮಿಕರನ್ನು ನೇಮಿಸಿಕೊಳ್ಳುವ ಬಗ್ಗೆ:–**

ವಾರ್ಡ್ 70ರ, ಹಿರಿಯ ಆರೋಗ್ಯ ಸಹಾಯಕರಾದ ಶ್ರೀ ಕೆ.ಶಿವಲಿಂಗಯ್ಯರವರು ಮಾತನಾಡಿ, ವಾರ್ಡ್ ವ್ಯಾಪ್ತಿಯಲ್ಲಿ ಈ ಹಿಂದೆ ಕೆಲಸ ನಿರ್ವಹಿಸುತ್ತಿದ್ದ ಪೌರ ಕಾರ್ಮಿಕರು ವಯೋ ನಿವೃತ್ತಿ ಹೊಂದಿರುವುದರಿಂದ 38 ಪೌರ ಕಾರ್ಮಿಕರ ಕೊರತೆ ಇರುತ್ತದೆ. ಅವರ ಬದಲಿಗೆ ಬದಲಿ ಪೌರಕಾರ್ಮಿಕರನ್ನು ನೇಮಿಸಿಕೊಳ್ಳಬೇಕೆಂದು ಸಭೆಗೆ ತಿಳಿಸಿದರು.

ಇದಕ್ಕೆ ನೋಡಲ್ ಅಧಿಕಾರಿರವರು ಪ್ರತಿಕ್ರಿಯಿಸಿ ಪೌರ ಕಾರ್ಮಿಕರನ್ನು ನೇಮಿಸಿಕೊಳ್ಳುವ ಬಗ್ಗೆ ಎಸ್.ಡಬ್ಲ್ಯೂ.ಎಂ ಸೆಲ್ ಮುಖಾಂತರ ಮೇಲಧಿಕಾರಿಗಳಿಗೆ ಪ್ರಸ್ತಾವನೆಯನ್ನು ಸಲ್ಲಿಸಲು ಸೂಚಿಸಿದರು.

- **<u>ವಿಷಯ ಸಂಖ್ಯೆ:2 :–</u> ಅನಧಿಕೃತ ಕಟ್ಟಡಗಳಿಗೆ ನೋಟೀಸ್ ಜಾರಿ ಮಾಡುವ ಬಗ್ಗೆ:**

ನೋಡಲ್ ಅಧಿಕಾರಿಗಳು ಮಾತನಾಡಿ, ಮಾನ್ಯ ಉಚ್ಚ ನ್ಯಾಯಾಲಯದ ಆದೇಶದಂತೆ ಅನಧಿಕೃತ ಕಟ್ಟಡಗಳನ್ನು ಸರ್ವೇ ಮಾಡಿ ತಿಳುವಳಿಕೆ ಪತ್ರಗಳನ್ನು ನೀಡಲು ಮಾನ್ಯ ಮುಖ್ಯ ಆಯುಕ್ತರು, ಬಿಬಿಎಂಪಿರವರು ಆದೇಶ ನೀಡಿದ್ದು, ಅದರಂತೆ

ಕಂದಾಯ ಅಧಿಕಾರಗಳ ಸಹಕಾರದೊಂದಿಗೆ ವಾರ್ಡ್ 70ರ ವ್ಯಾಪ್ತಿಯಲ್ಲಿ ಅನಧಿಕೃತವಾಗಿ ನಿರ್ಮಿಸಿರುವ/ ನಿರ್ಮಿಸುತ್ತಿರುವ Category-1 & 2 ಕಟ್ಟಡಗಳಿಗೆ ನೋಟೀಸ್ ಜಾರಿ ಮಾಡಿರುವ ಬಗ್ಗೆ ಪ್ರಸ್ತಾಪಿಸಲಾಯಿತು. ಇದಕ್ಕೆ ವಾರ್ಡ್‌ನ ಸಹಾಯಕ ಅಭಿಯಂತರರು ಮಾತನಾಡಿ, ಕಂದಾಯ ಅಧಿಕಾರಗಳ ಸಹಕಾರದೊಂದಿಗೆ ವಾರ್ಡ್ 70ರ ವ್ಯಾಪ್ತಿಯಲ್ಲಿ ಅನಧಿಕೃತವಾಗಿ ನಿರ್ಮಿಸಿರುವ/ ನಿರ್ಮಿಸುತ್ತಿರುವ Category-1 & 2 ಕಟ್ಟಡಗಳಿಗೆ ನೋಟೀಸ್ ಜಾರಿ ಮಾಡಲಾಗುತ್ತಿದೆ ಎಂದು ತಿಳಿಸಿದರು.

- **ವಿಷಯ ಸಂಖ್ಯೆ:3**
  **ಘನ ತ್ಯಾಜ್ಯ ನಿರ್ವಹಣೆ ಬಗ್ಗೆ:-**

ಸಭೆಯಲ್ಲಿ ಹಾಜರಿದ್ದ ಹಿರಿಯ ಆರೋಗ್ಯ ಪರಿವೀಕ್ಷಕರಾದ ಶಿವಲಿಂಗಯ್ಯನವರು ಮಾತನಾಡಿ ಶುಚಿಮಿತ್ರ ಸಂಬಂಧ ವಾರ್ಡ್ ವ್ಯಾಪ್ತಿಯಲ್ಲಿರುವ 33 ಬ್ಲಾಕ್‌ಗಳ ಪೈಕಿ 16 ಬ್ಲಾಕ್‌ಗಳ ಸರ್ವೇ ಕಾರ್ಯ ನಡೆಸಲಾಗಿದೆ ಎಂದು ತಿಳಿಸಿದರು.

ಇತ್ತೀಚಿನ ದಿನಗಳಲ್ಲಿ ಕೋವಿಡ್-19 ಕೇಸ್‌ಗಳು ವಾರ್ಡ್ ವ್ಯಾಪ್ತಿಯಲ್ಲಿ ಬೆರಳಣಿಕೆಯಲ್ಲಿ ಕಂಡುಬರುತ್ತಿದ್ದು, ಕೇಸ್‌ಗಳ ಪ್ರಮಾಣ ಇಳಿಕೆಯಾಗುತ್ತಿದೆ ಎಂದು ತಿಳಿಸಿದರು.

ಕೊನೆಯದಾಗಿ ಮಾನ್ಯ ನೋಡಲ್ ಅಧಿಕಾರಿರವರು ಸಭೆಗೆ ಹಾಜರಾದ ಎಲ್ಲಾ ಅಧಿಕಾರಿ/ನೌಕರರಿಗೆ ಮತ್ತು ಸದಸ್ಯರಿಗೆ ವಂದನೆಯನ್ನು ತಿಳಿಸುತ್ತಾ ಇನ್ನು ಮುಂದೆಯೂ ಈ ಸಭೆಗಳಲ್ಲಿ ಪೂರ್ವತಯಾರಿಯೊಂದಿಗೆ ಪಾಲ್ಗೊಂಡು ವಾರ್ಡ್ ನಂ.70ರ ಅಭಿವೃದ್ಧಿಗೆ ಸಹಕಾರ ನೀಡಬೇಕೆಂದು ಮನವಿ ಮಾಡಿದರು.

➢ ಸದಸ್ಯ ಕಾರ್ಯದರ್ಶಿ ಹಾಗೂ ಸಹಾಯಕ ಅಭಿಯಂತರರಾದ ಶ್ರೀ ಅವೀಶ್ ಹೆಚ್.ಎಂ ರವರು ಸಭೆಗೆ ಹಾಜರಾದ ಎಲ್ಲಾ ಅಧಿಕಾರಿಗಳು/ನೌಕರರಿಗೂ ಮತ್ತು ಸದಸ್ಯರಿಗೂ ವಂದನೆಯನ್ನು ತಿಳಿಸುವುದರೊಂದಿಗೆ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

**ಸದಸ್ಯ ಕಾರ್ಯದರ್ಶಿ**
**ಹಾಗೂ ಸಹಾಯಕ ಅಭಿಯಂತರರು**
**ವಾರ್ಡ್ 70, ರಾಜಗೋಪಾಲ ನಗರ**
**ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ**

**ವಾರ್ಡ್ ಸಮಿತಿ ಅಧ್ಯಕ್ಷರು**
**ಹಾಗೂ ವಾರ್ಡ್‌ನ ನೋಡಲ್ ಅಧಿಕಾರಿ**
**ವಾರ್ಡ್ ನಂ.70, ರಾಜಗೋಪಾಲ ನಗರ**
**ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ**

**ಪ್ರತಿಯನ್ನು:**

1) ಮಾನ್ಯ ಶಾಸಕರು, ದಾಸರಹಳ್ಳಿ ವಿಧಾನಸಭಾ ಕ್ಷೇತ್ರ, ರವರ ಆದ್ಯ ಗಮನಕ್ಕೆ ಕಳುಹಿಸಿದೆ.
2) ಮಾನ್ಯ ವಲಯ ಆಯುಕ್ತರು, ದಾಸರಹಳ್ಳಿ ವಲಯ, ಬಿಬಿಎಂಪಿ ರವರ ಅವಗಾಹನೆಗಾಗಿ ಕಳುಹಿಸಿದೆ.
3) ಜಂಟಿ ಆಯುಕ್ತರು, ದಾಸರಹಳ್ಳಿ ವಲಯ, ಬಿಬಿಎಂಪಿ ರವರ ಅವಗಾಹನೆಗಾಗಿ ಕಳುಹಿಸಿದೆ.
4) ಕಾರ್ಯಪಾಲಕ ಅಭಿಯಂತರರು (ದಾಸರಹಳ್ಳಿ ವಿಭಾಗ) ರವರ ಮಾಹಿತಿಗಾಗಿ ಕಳುಹಿಸಿದೆ.
5) ಸಹಾಯಕ ಕಾರ್ಯಪಾಲಕ ಅಭಿಯಂತರರು (ಹೆಗ್ಗನಹಳ್ಳಿ) ರವರ ಮಾಹಿತಿಗಾಗಿ ಕಳುಹಿಸಿದೆ.
6) ಸಹಾಯಕ ಕಂದಾಯ ಅಧಿಕಾರಿ (ಹೆಗ್ಗನಹಳ್ಳಿ) ರವರ ಮಾಹಿತಿಗಾಗಿ ಕಳುಹಿಸಿದೆ.
7) ಹಿರಿಯ/ಕಿರಿಯ ಆರೋಗ್ಯ ಪರಿವೀಕ್ಷಕರು ವಾರ್ಡ್ ನಂ.70 ರವರ ಮಾಹಿತಿಗಾಗಿ
8) ವಾರ್ಡ್ ಸಮಿತಿ ಸಭೆಯ ಸದಸ್ಯರಿಗೆ ಮಾಹಿತಿಗಾಗಿ ಕಳುಹಿಸಿದೆ.
9) ಕಛೇರಿ ಕಡತಕ್ಕೆ